# ಎನ್‌ಐಟಿಕೆಯಿಂದ ಸಮಾಜಮುಖಿ ಶಿಕ್ಷಣ



ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ವ್ಯವಸ್ಥೆ ಮೂಲಕ ಲೋಕಾರ್ಪಣೆಗೊಳಿಸಿದ ಎನ್‌ಐಟಿಕೆ ವಿದ್ಯಾರ್ಥಿನಿಲಯ.

■ ವಿಜಯವಾಣಿ ಸುದ್ದಿಜಾಲ ಮಂಗಳೂರು

ಎನ್‌ಐಟಿಕೆಯಲ್ಲಿ ಅಭಿವೃದ್ಧಿ, ಜ್ಞಾನ ಹಾಗೂ ಸಮಾಜಮುಖಿ ಶಿಕ್ಷಣ ಸಿಗುತ್ತಿದೆ. ಇದು ದೇಶದ ಭದ್ರ ಬನಾದಿಗೆ ಅಗತ್ಯ ಎಂದು ಎನ್‌ಐಟಿಕೆ ಸುರತ್ಕಲ್‌ನ ನಿರ್ದೇಶಕ ಪ್ರೊ.ಬಿ.ರವಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ವರ್ಚುವಲ್ ವ್ಯವಸ್ಥೆಯಲ್ಲಿ ಹಾಸ್ಟೆಲ್ ಉದ್ಘಾಟಿಸಿ ಮಾತನಾಡಿದರು.

**» ನಿರ್ದೇಶಕ ಪ್ರೊ.ಬಿ.ರವಿ ಹೇಳಿಕೆ**

ಭಾರತದಲ್ಲಿ ಸುಸ್ಥಿರ ಕ್ಯಾಂಪಸ್ ಪೈಕಿ ಐಐಟಿಗಳ ನಂತರದ ಸ್ಥಾನದಲ್ಲಿ ಸುರತ್ಕಲ್ ಎನ್‌ಐಟಿಕೆ ಇದೆ ಎಂಬುದು ಹೆಮ್ಮೆಯ ಸಂಗತಿ. ಎನ್‌ಐಟಿಕೆಯಿಂದ ಅಭಿವೃದ್ಧಿಪೂರ್ಣ ಶಿಕ್ಷಣ, ನೂತನ ಸಂಶೋಧನೆ, ಆರೋಗ್ಯ ಸ್ನೇಹಿ ಪರಿಸರಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಎನ್‌ಐಟಿಕೆಯಲ್ಲಿ ಮಂಗಳವಾರ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಎನ್‌ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ, ದ.ಕ. ಸಂಸದರು, ಮಂಗಳೂರು ಮಹಾನಗರ ಪಾಲಿಕೆ ಸದಸ್ಯರಾದ ಶೋಭಾ ರಾಣಿ, ಶ್ವೇತಾ, ವಿಧಾನ ಪರಿಷತ್ ಮಾಜಿ ಸದಸ್ಯ ಕ್ಯಾ.ಗಣೇಶ್ ಕಾರ್ಣಿಕ್ ಭಾಗವಹಿಸಿದ್ದರು. ಡೀನ್ ಚಿತ್ತರಂಜನ್ ಹೆಗ್ಡೆ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಪ್ರೊ.ಪುಷ್ಪರಾಜ್ ಶೆಟ್ಟಿ ವಂದಿಸಿದರು.

**ವಿವಿ ಸಂಶೋಧನಾ ವಿಭಾಗಕ್ಕೆ 20 ಕೋಟಿ ರೂ.:** ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ಕಾಲದಲ್ಲಿ ಎಲ್ಲ ರಂಗಗಳಲ್ಲೂ ಭಾರತ ಅಭಿವೃದ್ಧಿ ಕಾಣಬೇಕು ಎಂಬುದು ಪ್ರಧಾನಿಗಳ ಕನಸು. ರಾಷ್ಟ್ರೀಯ ಶಿಕ್ಷಣ ನೀತಿ ಮೂಲಕ ಶೈಕ್ಷಣಿಕ ಪರಿವರ್ತನೆ ತರಲಾಗುತ್ತಿದ್ದು, ಕೇರಳ ಕೇಂದ್ರೀಯ ವಿಶ್ವವಿದ್ಯಾಲಯದ ಆಡಳಿತ ವಿಭಾಗಕ್ಕಾಗಿ ಪೆರಿಯ ಕ್ಯಾಂಪಸ್‌ನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹೆಸರಿನಲ್ಲಿ ನಿರ್ಮಿಸಲಾಗಿರುವ ನೂತನ ಕಟ್ಟಡವನ್ನೂ ಪ್ರಧಾನಿ ನರೇಂದ್ರ ಮೋದಿ ಆನ್‌ಲೈನ್ ಮೂಲಕ ಲೋಕಾರ್ಪಣೆಗೊಳಿಸಿದರು. ಜತೆಗೆ, ಮಂಗಳೂರು ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗಕ್ಕೆ 20 ಕೋಟಿ ರೂ.ಬಿಡುಗಡೆಗೊಳಿಸಲಾಗಿದೆ.

Vijayavani, Date:21/02/24, p.no - 05